# Akashvani : Bangalore

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 26.03.2024 / 18.40 hrs

ಮುಖ್ಯಾಂಶಗಳು

೧. ಲೋಕಸಭಾ ಚುನಾವಣೆ - ರಾಜ್ಯದ ಎಲ್ಲ ಮತಕ್ಷೇತ್ರಗಳಲ್ಲಿ ನೀತಿ ಸಂಹಿತೆ ಪಾಲನೆಯ ಮೇಲೆ ನಿಕಟ ನಿಗಾ

೨. ಚುನಾವಣಾ ಅಕ್ರಮ ನಿಯಂತ್ರಣಕ್ಕೆ ೨೮ ಲೋಕಸಭಾ ಮತಕ್ಷೇತ್ರಗಳಲ್ಲಿ ಕಟ್ಟೆಚ್ಚರ

೩. ಬಿರುಬೇಸಿಗೆಯಲ್ಲಿ ಚುನಾವಣೆ ನಡೆಯುತ್ತಿದೆ - ಸೂಕ್ತ ಎಚ್ಚರಿಕೆ ಅಗತ್ಯ ಕೇಂದ್ರ ಚುನಾವಣಾ ಆಯೋಗದ ಸಲಹೆ

೪. ರಾಜ್ಯದ ಎರಡು ಕಡೆ ನದೀ ಅವಘಡ - ೬ ಸಾವು

<><*<><>*><>

ಲೋಕಸಭಾ ಚುನಾವಣೆ ಮಾದರಿ ನೀತಿ ಸಂಹಿತೆಯ ಕಟ್ಟುನಿಟ್ಟಿನ ಪಾಲನೆಯ ಮೇಲೆ ಜಿಲ್ಲಾಡಳಿತಗಳು ನಿಕಟ ನಿಗಾ ಇಟ್ಟಿದ್ದು, ಅಗತ್ಯ ಸೂಚನೆಗಳನ್ನು ಹೊರಡಿಸುತ್ತಿವೆ.

ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ಮಲಾಡಿ ಹಳ್ಳಿ ಸಮೀಪ ಅನಧಿಕೃತವಾಗಿ ಸಾಗಿಸುತ್ತಿದ್ದ ೧೫೦ ಕ್ವಿಂಟಲ್ ಅನ್ನಭಾಗ್ಯ ಯೋಜನೆಯ ಅಕ್ಕಿ ಚೀಲಗಳನ್ನು ವಶಕ್ಕೆ ಪಡೆಯಲಾಗಿದೆ. ಶಿವಮೊಗ್ಗ ರಸ್ತೆಯಿಂದ ಇದನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿರುವ ಮಾಹಿತಿಯನ್ನು ಆಧರಿಸಿ ಹೊಳಲ್ಕೆರೆ ಪೊಲೀಸರು ದಾಳಿ ನಡೆಸಿದರು. ಅಗತ್ಯ ವಸ್ತುಗಳ ನಿಯಂತ್ರಣ ಕಾಯ್ದೆ ಕಲಂ-೩ ಮತ್ತು ಚುನಾವಣೆ ಅಕ್ರಮಗಳ ತಡೆಗಟ್ಟುವ ಕಾಯ್ದೆ ಕಲಂ-೭ ರ ಅಡಿ ಪ್ರಕರಣ ದಾಖಲಿಸಲಾಗಿದೆ. ವಿಚಾರಣೆ ಪ್ರಗತಿಯಲ್ಲಿದೆ.

ದಕ್ಷಿಣಕನ್ನಡ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆಗೆ ಮತದಾನದ ಜಾಗೃತಿ ಕಾರ್ಯಕ್ರಮ ಮಂಗಳೂರಿನ ಹಲವೆಡೆ ಇಂದು ನಡೆಯಿತು. ಸೈಂಟ್ ಆಗ್ನೇಸ್ ಕಾಲೇಜಿನ ವಿದ್ಯಾರ್ಥಿಗಳು ಬೀದಿ ನಾಟಕ ಪ್ರದರ್ಶನದ ಮೂಲಕ ಮತದಾನ ಜಾಗೃತಿ ಮೂಡಿಸಿದರು. ಜಿಲ್ಲಾ ಪಂಚಾಯತ್ ಸಿಇಒ ಮಾತನಾಡಿ, ಬರಲಿರುವ ಚುನಾವಣೆಯಲ್ಲಿ ಪ್ರತಿಯೊಬ್ಬ ಅರ್ಹ ಮತದಾರರು ತಪ್ಪದೇ ಮತದಾನ ಮಾಡಬೇಕು. ತಮ್ಮ ಹಕ್ಕನ್ನು ಜವಾಬ್ದಾರಿಯುತವಾಗಿ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸಬೇಕು ಎಂದು ಹೇಳಿದರು.

ಚಾಮರಾಜನಗರ ಜಿಲ್ಲೆಯಲ್ಲಿ ಮತದಾನದ ಪ್ರಮಾಣ ಹೆಚ್ಚಿಸಲು ಬೃಹತ್ ಜಾಗೃತಿ ಜಾಥಾ ನಡೆಯಿತು. ೨೦೨೪ರ ಲೋಕಸಭಾ ಚುನಾವಣೆ ಮತ್ತು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಸಂದರ್ಭದಲ್ಲಿ ಆಯೋಜಿಸಲಾಗಿದ್ದ ಈ ಜಾಥಾದಲ್ಲಿ ಜಿಲ್ಲೆಯ ವಿವಿಧ ಮಹಿಳಾ ಕಲಾ ತಂಡಗಳು ಪಾಲ್ಗೊಂಡವು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹಲವೆಡೆ ಇಂದು ಲೋಕಸಭಾ ಚುನಾವಣೆಗೆ ಮತದಾರರ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ದೇವನಹಳ್ಳಿ ತಾಲೂಕಿನ ವಿಜಯಪುರ ಪುರಸಭಾ ವ್ಯಾಪ್ತಿಯಲ್ಲಿ ಕಡಿಮೆ ಮತದಾನವಾಗಿರುವ ಪ್ರಮುಖ ಬೀದಿ ಹಾಗೂ ಪ್ರದೇಶಗಳಲ್ಲಿ ತಮಟೆ ವಾದನದೊಂದಿಗೆ ಮನೆ ಮನೆಗೆ ತೆರಳಿ ಮತದಾರರಿಗೆ ತಾಂಬೂಲ ನೀಡಿ ಮತ ಚಲಾಯಿಸಬೇಕೆಂದು ಜಾಗೃತಿ ಮೂಡಿಸಲಾಯಿತು. ಎಲ್ಲ ಮತದಾರರು ಸಕ್ರಿಯವಾಗಿ ಚುನಾವಣೆಯಲ್ಲಿ ಭಾಗವಹಿಸಬೇಕೆಂದು ಪುರಸಭೆಯ ಮುಖ್ಯ ಅಧಿಕಾರಿ ಸಂತೋಷ್ ಹೇಳಿದರು.

ಹೊಸಪೇಟೆ-ಚಿತ್ರದುರ್ಗ ಮಾರ್ಗದ ಪಿಳ್ಳೆಕೇರೆನಹಳ್ಳಿ ಚೆಕ್‌ಪೋಸ್ಟ್‌ನಲ್ಲಿ ದಾಖಲೆಗಳಿಲ್ಲದೇ ಕಾರಿನಲ್ಲಿ ಸಾಗಿಸುತ್ತಿದ್ದ ೨೦ ಲಕ್ಷ ೩೫ ಸಾವಿರ ನಗದು ಹಣವನ್ನು ಜಪ್ತಿ ಮಾಡಲಾಗಿದೆ. ಖಚಿತ ಸುಳಿವಿನ ಆಧಾರದ ಮೇಲೆ ಕಾರಿನ ತಪಾಸಣೆ ನಡೆಸಿದ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡಿದ್ದಾರೆ.

ವಿಜಯನಗರ ಜಿಲ್ಲೆಯ ಚಿಗಟೇರಿ ಮತ್ತಿಹಳ್ಳಿ ಕ್ರಾಸ್ ಚೆಕ್‌ಪೋಸ್ಟ್ ಬಳಿ ಕಾರಿನಲ್ಲಿ ದಾಖಲೆಯಿಲ್ಲದೇ ಸಾಗಿಸುತ್ತಿದ್ದ ಒಂದು ಲಕ್ಷ ೭೦ ಸಾವಿರ ರೂಪಾಯಿ ನಗದು ಹಣವನ್ನು ವಶಪಡಿಸಿಕೊಳ್ಳಲಾಗಿದೆ. ಈ ವಾಹನ ಬೆಣ್ಣೆ ಹಳ್ಳಿ ಗ್ರಾಮದಿಂದ ಹರಪ್ಪನಹಳ್ಳಿ ಕಡೆಗೆ ಹೋಗುತ್ತಿತ್ತು. ಜಿಲ್ಲೆಯ ವಿವಿಧ ಠಾಣೆ

ವ್ಯಾಪ್ತಿಯಲ್ಲಿ ಅಕ್ರಮವಾಗಿ ಮಾರಾಟ ಮಾಡುತ್ತಿದ್ದ ೧೧೨ ಲೀಟರ್ ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಲ್. ಶ್ರೀಹರಿ ಬಾಬು ತೀಳಿಸಿದ್ದಾರೆ.

ಚಿಕ್ಕಬಳ್ಳಾಪುರ ತಾಲೂಕು ಸುಲ್ತಾನಪೇಟೆ ಚೆಕ್‌ಪೋಸ್ಟ್ ಅಧಿಕಾರಿಗಳು ವಾಹನ ತಪಾಸಣೆ ವೇಳೆ ಕಾರಿನಲ್ಲಿ ದಾಖಲೆಯಿಲ್ಲದೇ ಸಾಗಿಸುತ್ತಿದ್ದ ೫ ಲಕ್ಷ ರೂಪಾಯಿ ನಗದು ಹಣವನ್ನು ವಶಪಡಿಸಿಕೊಂಡಿದ್ದಾರೆ. ನಂದಿಗಿರಿಧಾಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಉತ್ತರಕನ್ನಡ ಜಿಲ್ಲೆಯಲ್ಲಿ ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿರುವ ಕಾರಣ ಮದುವೆ ಮತ್ತಿತರ ಸಮಾರಂಭಗಳನ್ನು ನಡೆಸುವ ಮೊದಲು ಜಿಲ್ಲಾಡಳಿತಕ್ಕೆ ಮಾಹಿತಿ ನೀಡಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಗಂಗೂಬಾಯಿ ಮಾನಕರ್ ತಿಳಿಸಿದ್ದಾರೆ. ಖಾಸಗಿ ಸಮಾರಂಭಗಳಿಗೆ ಅನುಮತಿ ನೀಡುವ ವ್ಯವಸ್ಥೆಯಿಲ್ಲ. ಆದರೆ ಚುನಾವಣೆ ನಿಯಮಗಳ ಪ್ರಕಾರ ಜನ ಸೇರುವ ಸಮಾರಂಭಗಳನ್ನು ನಡೆಸುವಾಗ ಮಾಹಿತಿ ನೀಡಬೇಕಾಗಿರುವುದು ಕಡ್ಡಾಯವಾಗಿದೆ ಎಂದು ಅವರು ತಿಳಿಸಿದ್ದಾರೆ.

ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದಲ್ಲಿ ಜಿಲ್ಲೆಯ ಗಡಿಭಾಗದ ಕುದುರೆಮುಖ, ಕೊಟ್ಟಿಗೆಹಾರ, ಮುಡಿಗೇರೆ ತಾಲೂಕಿನ ಜಾವಳಿ, ಮಣ್ಣಿನಪಾಲ್ ಮುಂತಾದ ಗ್ರಾಮಗಳಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಇಂದು ಭೇಟಿ ನೀಡಿ, ಚೆಕ್‌ಪೋಸ್ಟ್‌ಗಳು ಮತ್ತು ಮತಗಟ್ಟೆಗಳನ್ನು ಪರಿಶೀಲಿಸಿದರು. ಮತದಾನದ ಮಹತ್ವ ಕುರಿತು ಇದೇ ವೇಳೆ ಸ್ಥಳೀಯರಿಗೆ ಅರಿವು ಮೂಡಿಸಲಾಯಿತು.

ಗಜೇಂದ್ರಘಡದಿಂದ ಹುಬ್ಬಳ್ಳಿಗೆ ದಾಖಲೆಯಿಲ್ಲದೇ ಕೊಂಡೊಯ್ಯುತ್ತಿದ್ದ ೨ ಲಕ್ಷ ರೂಪಾಯಿ ಮೌಲ್ಯದ ೨೩೦ ಇಳಕಲ್ ಸೀರೆಗಳನ್ನು ವಶಪಡಿಸಿಕೊಳ್ಳಲಾಗಿದೆ. ಗದಗ ರಸ್ತೆ ಚೆಕ್‌ಪೋಸ್ಟ್ ಸಿಬ್ಬಂದಿ ಕಾರಿನ ತಪಾಸಣೆ ಮಾಡಿದಾಗ ಈ ಸರಕನ್ನು ಪತ್ತೆ ಮಾಡಲಾಯಿತು. ಚಾಲಕನ ವಿಚಾರಣೆ ಪ್ರಗತಿಯಲ್ಲಿದೆ ಎಂದು ಸಹಾಯಕ ಚುನಾವಣಾಧಿಕಾರಿ ಈಶ್ವರ್ ಉಳ್ಳಾಗಡ್ಡಿ ತಿಳಿಸಿದ್ದಾರೆ.

ತುಮಕೂರು ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಬಕಾರಿ ಇಲಾಖೆಯು ಚುನಾವಣೆ ನೀತಿ ಸಂಹಿತೆ ಉಲ್ಲಂಘನೆಗೆ ಸಂಬಂಧಿಸಿದಂತೆ ಈ ತಿಂಗಳ ೨೪ರವರೆಗೆ ೧೯೧ ದಾಳಿಗಳನ್ನು ನಡೆಸಿದ್ದು, ೧೪೬ ಮೊಕದ್ದಮೆಗಳನ್ನು ದಾಖಲಿಸಿಕೊಂಡಿದೆ. ಈ ವೇಳೆ ೭೭ ಲಕ್ಷ ೭೨ ಸಾವಿರದ ೮೭೨ ರೂಪಾಯಿ ಮೌಲ್ಯದ ೭ ಸಾವಿರದ ೬೫೧ ಲೀಟರ್ ಮದ್ಯ, ೧೭ ಸಾವಿರದ ೬೪೮ ಲೀಟರ್ ಬಿಯರ್, ೩೦ ಲೀಟರ್ ಸೇಂದಿ ಸೇರಿದಂತೆ ೨೦ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಬಕಾರಿ ಉಪ ಆಯುಕ್ತರು ತಿಳಿಸಿದ್ದಾರೆ.

**<><*<><>*><>**

ದೇಶದ ಬಹುತೇಕ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ಕೇಂದ್ರ ಚುನಾವಣಾ ಆಯೋಗ ಮಾರ್ಗಸೂಚಿಯೊಂದನ್ನು ಹೊರಡಿಸಿದೆ. ದೇಶದ ಬಹುತೇಕ ಪ್ರದೇಶಗಳಲ್ಲಿ ಈಗ ರಣ ಬಿಸಿಲಿದ್ದು, ಉಷ್ಣಗಾಳಿ ಬೀಸುತ್ತಿದೆ. ಬೇಸಿಗೆ ತೀವ್ರಗೊಂಡಂತೆ ಮುಂಬರುವ ದಿನಗಳಲ್ಲಿ ತಾಪಮಾನ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇರುವುದಾಗಿ ಭಾರತ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬಿಸಿಲು ಹೆಚ್ಚಾದಂತೆ ಜೂನ್ ತಿಂಗಳವರೆಗೆ ಬಿಸಿಗಾಳಿಯ ತೀವ್ರತೆ ಮತ್ತು ಅವಧಿಯೂ ಹೆಚ್ಚಾಗುವ ಆತಂಕವಿದೆ. ಇಂತಹ ಪರಿಸ್ಥಿತಿಯ ನಿರ್ವಹಣೆ ಕುರಿತಂತೆ ರಾಷ್ಟ್ರೀಯ ವಿಕೋಪ ನಿರ್ವಹಣೆ ಪ್ರಾಧಿಕಾರ ನೀಡಿರುವ ಸಲಹೆ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎನ್ನುವ ಹವಾಮಾನ ಇಲಾಖೆಯ ಸೂಚನೆಗಳನ್ನು ಮಾರ್ಗಸೂಚಿಯಲ್ಲಿ ವಿವರಿಸಲಾಗಿದೆ. ಮಧ್ಯಾಹ್ನ ೧೨ ರಿಂದ ೩ ಗಂಟೆಯ ನಡುವೆ ಜನರು ಹೊರಗೆ ಹೋಗುವುದನ್ನು ತಪ್ಪಿಸಬೇಕು. ಇದರಿಂದ ಉಷ್ಣಗಾಳಿಯ ಪರಿಣಾಮದಿಂದ ತಪ್ಪಿಸಿಕೊಳ್ಳಲು ಸಾಧ್ಯವಿದೆ. ಬಿರುಬೇಸಿಗೆಯ ದಿನಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ನೀರು ಕುಡಿಯಬೇಕು ಮತ್ತು ತಾಜಾ ಆಹಾರ ಸೇವಿಸಬೇಕು ಎಂದೂ ಸಹ ಶಿಫಾರಸ್ಸು ಮಾಡಲಾಗಿದೆ. ಲೋಕಸಭಾ ಚುನಾವಣೆ ದಿನಗಳಲ್ಲಿ ದೇಶದ ಎಲ್ಲ ಮತಗಟ್ಟೆಗಳಲ್ಲಿ ಕುಡಿಯುವ ನೀರು ಮತ್ತು ನೆರಳಿನ ವ್ಯವಸ್ಥೆಯಂತಹ ಕನಿಷ್ಠ ಮೂಲಸೌಕರ್ಯಗಳನ್ನು ಸಜ್ಜಾಗಿಡಬೇಕೆಂದು ಕೇಂದ್ರ ಚುನಾವಣಾ ಆಯೋಗ ಮುಖ್ಯ ಚುನಾವಣಾಧಿಕಾರಿಗಳಿಗೆ ಸೂಚಿಸಿದೆ.

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ೩ನೇ ಅವಧಿಗೆ ದೇಶದ ಪ್ರಧಾನಮಂತ್ರಿಯಾಗಬೇಕು ಎನ್ನುವುದು ದೇಶದ ಜನತೆಯ ಆಶಯವಾಗಿದೆ ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಮತ್ತು ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಹೇಳಿದ್ದಾರೆ. ದೂರದರ್ಶನದೊಂದಿಗೆ ಮಾತನಾಡಿದ ಅವರು, ಪ್ರಧಾನಿ

ಮೋದಿ ನೇತೃತ್ವದಲ್ಲಿ ಕಳೆದ ೧ ದಶಕದಲ್ಲಿ ದೇಶದಲ್ಲಿ ಆಗಿರುವ ಅಭಿವೃದ್ಧಿ ಕಾರ್ಯಕ್ರಮಗಳು ಜನರಿಗೆ ಮನವರಿಕೆಯಾಗಿವೆ. ಮೂರನೇ ಬಾರಿಗೆ ಕೇಂದ್ರದಲ್ಲಿ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬರಬೇಕು ಎನ್ನುವ ವಾತಾವರಣ ನಿರ್ಮಾಣವಾಗಿದೆ. ಹೀಗಾಗಿ ರಾಜ್ಯದಲ್ಲಿ ಒಗ್ಗೂಡಿ ಕಾರ್ಯ ನಿರ್ವಹಿಸಲಾಗುತ್ತಿದೆ. ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಕಾರ್ಯಯೋಜನೆ ರೂಪಿಸಿದ್ದು, ತಾವು ಜಯಗಳಿಸುವ ವಿಶ್ವಾಸವಿದೆ ಎಂದು ಅವರು ಹೇಳಿದರು. ರಾಜ್ಯ ಸರ್ಕಾರ ಘೋಷಿಸಿರುವ ಪಂಚಖಾತ್ರಿ ಯೋಜನೆಗಳಿಗೆ ಬಹುತೇಕ ಹಣ ವೆಚ್ಚವಾಗುತ್ತಿದ್ದು, ರಾಜ್ಯದಲ್ಲಿ ಅಭಿವೃದ್ಧಿ ಕೆಲಸ ಕಾರ್ಯಗಳು ಕುಂಠಿತವಾಗಿವೆ ಎಂದು ಜಗದೀಶ್ ಶೆಟ್ಟರ್ ಟೀಕಿಸಿದರು.

<><*<><>*><>

ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ದೇಶದ ಯುವಜನತೆಗೆ ಎರಡು ಕೋಟಿ ಉದ್ಯೋಗ ಸೃಷ್ಟಿ ಮಾಡುವುದಾಗಿ ಹೇಳಿದ್ದ ಮಾತಿಗೆ ತಪ್ಪಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಬೆಂಗಳೂರಿನಲ್ಲಿಂದು ಹೇಳಿದ್ದಾರೆ. ಕೇಂದ್ರದಲ್ಲಿ ಉತ್ತಮ ಆಡಳಿತ ನೀಡುವಲ್ಲಿ ಬಿಜೆಪಿ ವಿಫಲವಾಗಿದೆ. ಕೇಂದ್ರದಿಂದ ರಾಜ್ಯಕ್ಕೆ ನ್ಯಾಯಯುತ ಅನುದಾನ ದೊರೆತಿಲ್ಲ. ಬರಗಾಲ ಮತ್ತು ಪ್ರಕೃತಿ ವಿಕೋಪದಂತಹ ಸಂಕಷ್ಟಗಳನ್ನು ರಾಜ್ಯದ ಜನತೆ ಎದುರಿಸುತ್ತಿರುವಾಗ ಕೇಂದ್ರ ಸರ್ಕಾರ ಸೂಕ್ತವಾಗಿ ಸ್ಪಂದಿಸಿಲ್ಲ ಎಂದು ಅವರು ಆಪಾದಿಸಿದರು. ದೇಶದ ಯಾವುದೇ ರಾಜ್ಯದಲ್ಲಿ ಬರಗಾಲ ಪರಿಸ್ಥಿತಿ ಘೋಷಣೆಯಾದ ತಕ್ಷಣ ಮನ್ರೇಗಾ ಯೋಜನೆಯಡಿ ೧೫೦ ದಿನಗಳ ಉದ್ಯೋಗ ನೀಡಬೇಕು ಎನ್ನುವ ಕಡ್ಡಾಯ ಕಾನೂನು ಇದೆ. ಆದರೆ ರಾಜ್ಯದಲ್ಲಿ ಕಳೆದ ೫ ತಿಂಗಳಿಂದ ಬರಗಾಲ ಇದ್ದರೂ ಇದುವರೆಗೂ ಕೇಂದ್ರ ಸರ್ಕಾರ ನರೇಗಾ ಕೆಲಸ ದಿನಗಳನ್ನು ಹೆಚ್ಚಿಸುವ ನಿರ್ಧಾರ ಮಾಡಿಲ್ಲ. ರಾಜ್ಯದ ೨೨೩ ತಾಲೂಕುಗಳು ಬರ ಪೀಡಿತವಾಗಿವೆ. ಕೇಂದ್ರ ಸರ್ಕಾರ ಬರಪರಿಹಾರ ಹಣ ನೀಡುತ್ತಿಲ್ಲ ಎಂದು ಶಿವರಾಜ್ ತಂಗಡಗಿ ಟೀಕಿಸಿದರು.

<><*<><>*><>

ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ದೇಶದ ಯುವಜನತೆಗೆ ಎರಡು ಕೋಟಿ ಉದ್ಯೋಗ ಸೃಷ್ಟಿ ಮಾಡುವುದಾಗಿ ಹೇಳಿದ್ದ ಮಾತಿಗೆ ತಪ್ಪಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಬೆಂಗಳೂರಿನಲ್ಲಿಂದು ಹೇಳಿದ್ದಾರೆ. ಕೇಂದ್ರದಲ್ಲಿ ಉತ್ತಮ ಆಡಳಿತ ನೀಡುವಲ್ಲಿ ಬಿಜೆಪಿ ವಿಫಲವಾಗಿದೆ. ಕೇಂದ್ರದಿಂದ ರಾಜ್ಯಕ್ಕೆ ನ್ಯಾಯಯುತ ಅನುದಾನ ದೊರೆತಿಲ್ಲ. ಬರಗಾಲ ಮತ್ತು ಪ್ರಕೃತಿ ವಿಕೋಪದಂತಹ ಸಂಕಷ್ಟಗಳನ್ನು ರಾಜ್ಯದ ಜನತೆ ಎದುರಿಸುತ್ತಿರುವಾಗ ಕೇಂದ್ರ ಸರ್ಕಾರ ಸೂಕ್ತವಾಗಿ ಸ್ಪಂದಿಸಿಲ್ಲ ಎಂದು ಅವರು ಆಪಾದಿಸಿದರು. ದೇಶದ ಯಾವುದೇ ರಾಜ್ಯದಲ್ಲಿ ಬರಗಾಲ ಪರಿಸ್ಥಿತಿ ಘೋಷಣೆಯಾದ ತಕ್ಷಣ ಮನ್ರೇಗಾ ಯೋಜನೆಯಡಿ ೧೫೦ ದಿನಗಳ ಉದ್ಯೋಗ ನೀಡಬೇಕು ಎನ್ನುವ ಕಡ್ಡಾಯ ಕಾನೂನು ಇದೆ. ಆದರೆ ರಾಜ್ಯದಲ್ಲಿ ಕಳೆದ ೫ ತಿಂಗಳಿಂದ ಬರಗಾಲ ಇದ್ದರೂ ಇದುವರೆಗೂ ಕೇಂದ್ರ ಸರ್ಕಾರ ನರೇಗಾ ಕೆಲಸ ದಿನಗಳನ್ನು ಹೆಚ್ಚಿಸುವ ನಿರ್ಧಾರ ಮಾಡಿಲ್ಲ. ರಾಜ್ಯದ ೨೨೩ ತಾಲೂಕುಗಳು ಬರ ಪೀಡಿತವಾಗಿವೆ. ಕೇಂದ್ರ ಸರ್ಕಾರ ಬರಪರಿಹಾರ ಹಣ ನೀಡುತ್ತಿಲ್ಲ ಎಂದು ಶಿವರಾಜ್ ತಂಗಡಗಿ ಟೀಕಿಸಿದರು.

<><*<><>*><>

ಜೆಡಿಎಸ್ ಕೋರ್ ಕಮಿಟಿ ಸಭೆ ಬೆಂಗಳೂರಿನಲ್ಲಿಂದು ನಡೆಯಿತು. ಹಾಸನ, ಮಂಡ್ಯ ಮತ್ತು ಕೋಲಾರ ಲೋಕಸಭಾ ಕ್ಷೇತ್ರಗಳಿಗೆ ಜೆಡಿಎಸ್ ಅಭ್ಯರ್ಥಿಗಳ ಆಯ್ಕೆ ಕುರಿತಂತೆ ಚರ್ಚಿಸಲಾಯಿತು. ಇಂದು ಸಂಜೆಯ ವೇಳೆಗೆ ಈ ಮೂರು ಅಭ್ಯರ್ಥಿಗಳ ಆಯ್ಕೆ ಅಂತಿಮವಾಗುವ ಸಾಧ್ಯತೆಯಿದೆ ಎಂದು ಪಕ್ಷದ ಹಿರಿಯ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ. ಇದಲ್ಲದೆ ಮಿತ್ರಪಕ್ಷ ಬಿಜೆಪಿಯೊಂದಿಗೆ ಹೊಂದಾಣಿಕೆ ಕುರಿತಂತೆಯೂ ಸಭೆಯಲ್ಲಿ ಸಮಾಲೋಚಿಸಲಾಯಿತು.

<><*<><>*><>

ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ, ಸಂತೋಷ್ ಕುಮಾರ್ ಎಚ್.ಎಲ್.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಹಾಸನ ಜಿಲ್ಲೆಯಲ್ಲಿ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ವತಿಯಿಂದ ಸಮರೋಪಾದಿಯಲ್ಲಿ ಸಿದ್ಧತೆ ನಡೆದಿದೆ.

ಭದ್ರತೆ ಹಿತ ದೃಷ್ಟಿಯಿಂದ ಜಿಲ್ಲೆಯ ಗಡಿಭಾಗಗಳಲ್ಲಿ ಒಟ್ಟು ೨೨ ಚೆಕ್ಪೋಸ್ಟ್ ಹಾಗೂ ಕಡೂರು ಗಡಿಭಾಗದಲ್ಲಿ ಆರು ಸೇರಿ ಹಾಸನ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು ೨೮ ಚೆಕ್ ಪೋಸ್ಟ್‌ಗಳನ್ನು ತೆರೆಯಲಾಗಿದೆ.

ಜಿಲ್ಲೆಯ ೭ ಹಾಗೂ ಚಿಕ್ಕಮಗಳೂರು ಜಿಲ್ಲೆಯ ಒಂದು ಸೇರಿ ಒಟ್ಟು ೮ ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಂತೆ ಹಾಸನ ಲೋಕಸಭಾ ಕ್ಷೇತ್ರ ರಚನೆಯಾಗಿದೆ. ಹಾಸನ, ಬೇಲೂರು, ಆಲೂರು-ಸಕಲೇಶಪುರ,

ಅರಕಲಗೂಡು, ಹೊಳೆನರಸೀಪುರ, ಶ್ರವಣಬೆಳಗೊಳ, ಅರಸೀಕೆರೆ ವಿಧಾನಸಭಾ ಕ್ಷೇತ್ರಗಳ ಜೊತೆ ಚಿಕ್ಕಮಗಳೂರು ಜಿಲ್ಲೆಯ ಕಡೂರು ಕ್ಷೇತ್ರ ಕೂಡ ಈ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಸೇರಿದೆ.

ಹಾಸನ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು ೨ ಸಾವಿರದ ೨೨೧ ಮತಗಟ್ಟೆಗಳಿದ್ದು ಎಲ್ಲಾ ಮತಗಟ್ಟೆಗಳಿಗೆ ಭದ್ರತೆ ಹಾಗೂ ನ್ಯಾಯ ಮತ್ತು ಮುಕ್ತ ಮತದಾನಕ್ಕೆ ಅಧಿಕಾರಿಗಳನ್ನು ನಿಯೋಜಿಸಲು ಸಕಲ ಸಿದ್ಧತೆಗಳನ್ನು ಜಿಲ್ಲಾಡಳಿತ ಮಾಡಿಕೊಂಡಿದೆ. ಇನ್ನು ಹಾಸನ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು ೧೭ ಲಕ್ಷ ೨೪ ಸಾವಿರದ ೯೦೮ ಮತದಾರರಿದ್ದು ಈ ಪೈಕಿ ೮ ಲಕ್ಷ ೫೮ ಸಾವಿರದ ೬೬೧ ಪುರುಷರು ಮತದಾರರು, ೮ ಲಕ್ಷ ೬೬ ಸಾವಿರದ ೨೦೬ ಮಹಿಳಾ ಮತದಾರರು ಹಾಗೂ ಇತರೆ ೪೧ ಮತದಾರರನ್ನು ಹೊಂದಿದೆ.

ಹೊಸ ಅರ್ಹ ಮತದಾರರನ್ನು ಪಟ್ಟಿಯಲ್ಲಿ ಸೇರಿಸುವ ಜೊತೆಗೆ ಮತದಾನದ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅವರ ನೇತೃತ್ವದಲ್ಲಿ ಕಾಲೇಜುಗಳು, ಸಾರ್ವಜನಿಕ ಸ್ಥಳಗಳು ಹಾಗೂ ಜನನಿಬಿಡ ಪ್ರದೇಶಗಳಲ್ಲಿ ಮತದಾನದ ಮಹತ್ವ ಸಾರುವ ಬೀದಿ ನಾಟಕ, ಕೋಲಾಟ, ಬೊಂಬೆ ಪ್ರದರ್ಶನ ಸೇರಿದಂತೆ ಇನ್ನಿತರ ಸ್ವೀಪ್ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.

ಒಟ್ಟಾರೆ ಹಾಸನ ಜಿಲ್ಲೆಯಲ್ಲಿ ಈ ಭಾರಿ ಲೋಕಸಭಾ ಚುನಾವಣೆ ಯಶಸ್ವಿಯಾಗಿ ನಡೆಸಬೇಕು ಎಂದು ಪಣ ತೊಟ್ಟಿರುವ ಅಧಿಕಾರಿಗಳು ಅವಿರತ ಶ್ರಮ ವಹಿಸುತ್ತಿದ್ದಾರೆ.

<><*<><>*><>

ರಾಜ್ಯದಲ್ಲಿ ಇಂದು ಸಂಭವಿಸಿರುವ ಎರಡು ಪ್ರತ್ಯೇಕ ಅವಘಡಗಳಲ್ಲಿ ೬ ಮಂದಿ ಮೃತಪಟ್ಟಿದ್ದಾರೆ. ಮಂಡ್ಯ ಜಿಲ್ಲೆ ಮಳವಳ್ಳಿ ತಾಲೂಕಿನ ಮುತ್ತತ್ತಿಯಲ್ಲಿ ಕಾವೇರಿ ನದಿಯಲ್ಲಿ ಮುಳುಗಿ ನಾಲ್ವರು ಜಲ ಸಮಾಧಿಯಾಗಿರುವ ಘಟನೆ ನಡೆದಿದೆ. ಮೈಸೂರಿನ ಕನಕಗಿರಿಯಿಂದ ಪ್ರವಾಸಕ್ಕೆ ಬಂದಿದ್ದ ಗುಂಪಿನ ಕೆಲವರು ನದಿಗೆ ಇಳಿದಿದ್ದಾಗ ಈಜು ಬಾರದ ಒಬ್ಬನನ್ನು ರಕ್ಷಿಸಲು ಹೋಗಿ ಇನ್ನು ಮೂವರು ನೀರು ಪಾಲಾಗಿದ್ದಾರೆ. ಅಲಗೂರು ಪೊಲೀಸರು ಹಾಗೂ ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಶವಗಳನ್ನು ಹೊರತೆಗೆದಿದ್ದಾರೆ. ಮತ್ತೊಂದು ಪ್ರಕರಣ ಉಡುಪಿ ಜಿಲ್ಲೆಯ ಬ್ರಹ್ಮಾವರ ತಾಲೂಕು ಹೊಸಾಳ ಗ್ರಾಮದ ಸೀತಾನದಿಯಲ್ಲಿ ದೋಣಿಯಲ್ಲಿ ಮೀನು ಹಿಡಿಯಲು ಹೋದ ಇಬ್ಬರು ಯುವಕರು ಮುಳುಗಿ ಮೃತಪಟ್ಟಿದ್ದಾರೆ. ಮೀನಿಗೆ ಬಲೆ ಹಾಕುವಾಗ ನೀರಿನ ಸೆಳೆತಕ್ಕೆ ಸಿಲುಕಿ ಇವರು ನೀರಿಗೆ ಬಿದ್ದರು ಎನ್ನಲಾಗಿದೆ. ಬ್ರಹ್ಮಾವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

<><*<><>*><>

ಬಳ್ಳಾರಿ ಜಿಲ್ಲೆಯಲ್ಲಿ ಮೆದುಳು ಜ್ವರ ರೋಗ ಹರಡುವುದನ್ನು ನಿಯಂತ್ರಿಸಲು ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ಖಾಸಗಿ ಆಸ್ಪತ್ರೆಗಳ ತಜ್ಞ ವೈದ್ಯರಿಗೆ ಇಂದು ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು.

ಮೆದುಳು ಜ್ವರ ವೈರಾಣುಗಳನ್ನು ಹೊಂದಿದ ಹಂದಿ, ಬೆಳ್ಳಕ್ಕಿಯನ್ನು ಕಚ್ಚಿದ ಕ್ಯೂಲೆಕ್ಸ್ ಜಾತಿಯ ಸೊಳ್ಳೆಗಳು ಮನುಷ್ಯರಿಗೆ ಕಚ್ಚುವುದರಿಂದ ಈ ಜ್ವರ ಹರಡುತ್ತದೆ. ೨೦೦೭ ರಲ್ಲಿ ೧೫ ವರ್ಷದೊಳಗಿನ ಮಕ್ಕಳಿಗೆ ಮೆದುಳು ಜ್ವರ ನಿರೋಧಕ ಜೆಇ ಲಸಿಕೆಯನ್ನು ಅಭಿಯಾನದ ರೀತಿಯಲ್ಲಿ ನೀಡಿದ ನಂತರ ಪ್ರಸ್ತುತ ಪ್ರಕರಣಗಳು ಗಣನೀಯವಾಗಿ ಕಡಿಮೆಯಾಗಿವೆ. ಮಕ್ಕಳು ಹೆಚ್ಚಾಗಿ ಈ ರೋಗಕ್ಕೆ ತುತ್ತಾಗುತ್ತಿದ್ದು, ಕೆಲವರಿಗೆ ನರ ದೌರ್ಬಲ್ಯ ಮತ್ತು ಬುದ್ದಿ ಮಾಂದ್ಯತೆ ಉಂಟಾಗುತ್ತದೆ. ಪಾಲಕರು ತಮ್ಮ ಮಕ್ಕಳಿಗೆ ೯ನೇ ಮತ್ತು ೧೮ನೇ ತಿಂಗಳಲ್ಲಿ ೨ ಬಾರಿ ತಪ್ಪದೆ ಲಸಿಕೆ ಹಾಕಿಸಬೇಕು ಎಂದು ಜಿಲ್ಲಾ ರೋಗ ವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಅಬ್ದುಲ್ಲಾ ತಿಳಿಸಿದ್ದಾರೆ.

ಧ್ವನಿ : ಡಾ. ಅಬ್ದುಲ್ಲಾ

<><*<><>*><>

೧. ಗದಗ್ ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದ್ದು, ಸಾರ್ವಜನಿಕರಿಗೆ ಕುಡಿಯುವ ನೀರು ಪೂರೈಕೆಗೆ ಅಧಿಕಾರಿಗಳು ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸೂಚಿಸಿದ್ದಾರೆ. ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿರುವ ವಾರ್ಡ್ ಅಥವಾ ಗ್ರಾಮಗಳಲ್ಲಿ ಕೊಳವೆ ಬಾವಿ ಕೊರೆಸುವ ಬದಲಾಗಿ ಖಾಸಗಿ ಬೋರ್‌ವೆಲ್‌ಗಳಲ್ಲಿ ನೀರಿನ ಲಭ್ಯತೆಯನ್ನು ಪರಿಶೀಲಿಸಿ ಪಡೆಯಬೇಕು. ಅನಿವಾರ್ಯ ಸಂದರ್ಭಗಳಲ್ಲಿ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡಬೇಕು ಎಂದು ಅವರು ತಿಳಿಸಿದ್ದಾರೆ.

೨. ದಾವಣಗೆರೆ ಜಿಲ್ಲೆಯಲ್ಲಿ ಖರೀದಿ ಕೇಂದ್ರಕ್ಕೆ ರಾಗಿ ಮಾರಾಟಕ್ಕೆ ಅರ್ಜಿ ಸಲ್ಲಿಸಿರುವ ಹೊರ ತಾಲೂಕು ಅಥವಾ ಹೊರ ಜಿಲ್ಲೆಯ ಪಟ್ಟಿಯಲ್ಲಿರುವ ೮೨ ರೈತರು ಜಗಳೂರು ತಾಲ್ಲೂಕು ಕಚೇರಿಯ ಆಹಾರ ಶಾಖೆಯನ್ನು ಸಂಪರ್ಕಿಸಿ ೭ ದಿನಗಳ ಒಳಗಾಗಿ ಸಂಬಂಧಪಟ್ಟ ದಾಖಲೆಗಳ ಜೆರಾಕ್ಸ್ ಪ್ರತಿ, ೨೦೨೨-೨೩ ನೇ ಸಾಲಿನ ಮುಂಗಾರಿನ ರಾಗಿ ಬೆಳೆದ ಪಹಣಿ ಪ್ರತಿ, ಫ್ರೂಟ್ಸ್ ಐಡಿ, ಗ್ರೀನ್ ವೋಚರ್, ಆಧಾರ್ ಕಾರ್ಡ್,

ವೇ-ಬ್ರಿಡ್ಜ್ ರಶೀದಿ ಮೊದಲಾದ ಅಗತ್ಯ ದಾಖಲೆಗಳನ್ನು ನೀಡಬೇಕು ಎಂದು ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ತಿಳಿಸಿದ್ದಾರೆ.

೩. ಲೋಕಸಭಾ ಚುನಾವಣೆಯಲ್ಲಿ ಸಾರ್ವಜನಿಕರು ತಮ್ಮ ಅಮೂಲ್ಯ ಮತದಾನದ ಹಕ್ಕು ಚಲಾಯಿಸಲು ಉತ್ತೇಜಿಸುವ ಕ್ರಮವಾಗಿ ಕೇಂದ್ರ ಚುನಾವಣಾ ಆಯೋಗ ಜಾಗೃತ ಮತದಾರರಿಗಾಗಿ ಮತದಾರರ ಮಾರ್ಗದರ್ಶಿಯನ್ನು ಬಿಡುಗಡೆ ಮಾಡಿದೆ.

**<><*<><>*><>**

ಇನ್ನು ಹವಾವರ್ತಮಾನ...

ರಾಜ್ಯದಲ್ಲಿ ಒಣಹವೆ ಮುಂದುವರೆದಿದೆ.

ಬಾಗಲಕೋಟೆಯಲ್ಲಿ ಗರಿಷ್ಠ ಉಷ್ಣಾಂಶ ೩೯.೯ ಡಿಗ್ರಿ ಸೆಲ್ಸಿಯಸ್ ಹಾಗೂ ಚಾಮರಾಜನಗರದಲ್ಲಿ ಕನಿಷ್ಠ ಉಷ್ಣಾಂಶ ೧೮ ಡಿಗ್ರಿ ಸೆಲ್ಸಿಯಸ್ ಇತ್ತು.

ಬೆಂಗಳೂರು ಮತ್ತು ಸುತ್ತಮುತ್ತ ಶುಭ್ರ ಆಕಾಶವಿದ್ದು, ಗರಿಷ್ಠ ಉಷ್ಣಾಂಶ ೩೫ ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ ೨೧ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*> <>**

**<><*<> ನಮ್ಮ ಮುಂದಿನ ಸುದ್ದಿ ಮುಖ್ಯಾಂಶಗಳು ರಾತ್ರಿ ೭.೩೫ <>*> <>**